## 92. ಕೊರೊನಾ ಸಮಗ್ರ ಮಾಹಿತಿಗೆ ನ್ಯಾಸ್ಕಾಮ್ ಟೂಲ್

ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ಕೋವಿಡ್ ಪರಿಸ್ಥಿತಿ ನಿರ್ವಹಿಸಲು ಮುಂದಾಗಿರುವ ರಾಜ್ಯ ಸರ್ಕಾರ ನ್ಯಾಸ್ಕಾಮ್ ಸಹಯೋಗದಲ್ಲಿ ಅಭಿವೃದ್ಧಿಪಡಿಸಿದ ದತ್ತಾಂಶ ವಿಶ್ಲೇಷಣೆ ಸಾಧನವನ್ನು ಉಪ ಮುಖ್ಯಮಂತ್ರಿ ಡಾ:ಸಿ.ಎನ್. ಅಶ್ವತ್ಥನಾರಾಯಣರವರು ಬಿಡುಗಡೆ ಮಾಡಿದರು.

ಐಟಿ–ಬಿಟಿ ವಲಯದ ಪ್ರಮುಖರ ಜೊತೆ ನಡೆಸಿದ ವಿಡಿಯೊ ಕಾನ್ಫರೆನ್ಸ್‌ನಲ್ಲಿ ನ್ಯಾಷನಲ್ ಅಸೋಸಿಯೇಷನ್ ಆಫ್ ಸಾಫ್ಟ್‌ವೇರ್ ಆ್ಯಂಡ್ ಸರ್ವೀಸಸ್ ಕಂಪನೀಸ್ (ನ್ಯಾಸ್ಕಾಮ್) ಅಭಿವೃದ್ಧಿಪಡಿಸಿದ ದತ್ತಾಂಶ ವಿಶ್ಲೇಷಣೆ ಸಾಧನವನ್ನು ಬಿಡುಗಡೆ ಮಾಡಿ, ಕೊರೊನಾ ಸೋಂಕು ಹರಡುವ ಸಾಧ್ಯತೆ ವಿವರ, ಸೋಂಕಿನ ಮೂಲ, ಅದರ ವರ್ಗೀಕರಣ, ಸೋಂಕಿನ ಪ್ರಮಾಣ, ಅಂಕಿ ಅಂಶದ ಮಾಹಿತಿ, ಸೋಂಕು ಪತ್ತೆ ಪರೀಕ್ಷೆ ವಿವರ, ಚಿಕಿತ್ಸೆ ಹಾಗೂ ಲಭ್ಯವಿರುವ ಮೂಲ ಸೌಕರ್ಯ, ಮಾನವ ಸಂಪನ್ಮೂಲದ ರಿಯಲ್ ಟೈಮ್ ಮಾಹಿತಿ ಒದಗಿಸುವ ಈ ಸಾಧನ ಕೋವಿಡ್ ನಿಯಂತ್ರಣದಲ್ಲಿ ದೊಡ್ಡ ಮಟ್ಟದ ಸುಧಾರಣೆಗೆ ನೆರವಾಗಬಲ್ಲದು ಎಂದರು.

ಬಿಬಿಎಂಪಿ ಹೆಲ್ತ್ ಕೇರ್ ಆಪ್ತಮಿತ್ರ ಸಹಾಯವಾಣಿಯ ಕೆಲಸದ ಬಗ್ಗೆ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ. ಕೋವಿಡ್ ನಿಯಂತ್ರಣದಲ್ಲಿ ಬೆಂಗಳೂರನ್ನು ಮಾದರಿ ನಗರ ಎಂದು ಕೇಂದ್ರ ಸರ್ಕಾರ ಗುರುತಿಸಿದೆ. ಇದರಲ್ಲಿ ಐಟಿ–ಬಿಟಿ ವಲಯದ ಕೊಡುಗೆ ಅಪಾರವಿದೆ. ಕೋವಿಡ್ ಸೋಂಕು ಬಹು ದಿನಗಳವರೆಗೆ ನಮ್ಮ ನಡುವೆ ಇರುವುದರಿಂದ ಆರೋಗ್ಯ ಕ್ಷೇತ್ರದ ಮೂಲ ಸೌಕರ್ಯ ಹೆಚ್ಚಿಸಿಕೊಳ್ಳಬೇಕು. ಆರೋಗ್ಯ ಸೇವೆಯನ್ನು ಡಿಜಿಟಲೈಸ್ ಮಾಡುವುದು ಬಹಳ ಮುಖ್ಯವಾಗಿದ್ದು, ಇದಕ್ಕೆ ಐಟಿ–ಬಿಟಿ ವಲಯದವರ ನೆರವು ಅಗತ್ಯ ಎಂದರು.

ಜೈವಿಕ ತಂತ್ರಜ್ಞಾನ ವಿಷನ್ ಗ್ರೂಪ್ ಅಧ್ಯಕ್ಷೆ ಡಾ:ಕಿರಣ್ ಮಜುಂದಾರ್, ಮಾಹಿತಿ ತಂತ್ರಜ್ಞಾನದ ವಿಷನ್ ಗ್ರೂಪ್ ಅಧ್ಯಕ್ಷ ಕ್ರಿಸ್ ಗೋಪಾಲಕೃಷ್ಣ, ನ್ಯಾಸ್ಕಾಮ್ ಅಧ್ಯಕ್ಷೆ ದೇಬ್ಜಾನಿ ಘೋಷ್ ಹಾಗೂ ಉಪಾಧ್ಯಕ್ಷ ವಿಶ್ವನಾಥನ್, ಇನ್‌ಫೋಸಿಸ್ ಸಿಇಓಗಳು ಪ್ರವೀಣ್ ರಾವ್ ಫ್ರಾಕ್ಟಲ್ ಮತ್ತು ಶ್ರೀಕಾಂತ್ ಮತ್ತು ಮೈಕ್ರೋಸಾಫ್ಟ್‌ನ ರೋಹೀಣಿ ಶ್ರೀವತ್ಸ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗವಹಿಸಿದ್ದರು.

ಆಧಾರ:ವಿಜಯ ಕರ್ನಾಟಕ, ದಿನಾಂಕ:31.05.2020